# ಕರ್ನಾಟಕ ವಿಧಾನ ಪರಿಷತ್ತು

**ಸದಸ್ಯರ ಹೆಸರು** : ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1221

**ಉತ್ತರ ದಿನಾಂಕ** : 29-12-2022

**ಉತ್ತರಿಸುವವರು** : ಮಾನ್ಯ ಮುಖ್ಯಮಂತ್ರಿಗಳು

| ಕ್ರ ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ | ಮಂಡ್ಯ ಜಿಲ್ಲೆಯಲ್ಲಿರುವ ಒಟ್ಟು ಗ್ರಾಮಗಳ ಸಂಖ್ಯೆ ಎಷ್ಟು;(ತಾಲ್ಲೂಕುವಾರು ಮಾಹಿತಿ ನೀಡುವುದು) | ಮಂಡ್ಯ ಜಿಲ್ಲೆಯಲ್ಲಿರುವ ಒಟ್ಟು ಗ್ರಾಮಗಳ ಸಂಖ್ಯೆ 1402 ಗಳಾಗಿರುತ್ತವೆ.<br><br>ತಾಲ್ಲೂಕುವಾರು ಗ್ರಾಮಗಳ ಸಂಖ್ಯೆಯ ವಿವರವು ಈ ಕೆಳಕಂಡಂತೆ ಇರುತ್ತದೆ. |

| ಕ್ರ.ಸಂ | ತಾಲ್ಲೂಕಿನ ಹೆಸರು | ಗ್ರಾಮಗಳ ಸಂಖ್ಯೆ |
|---|---|---|
| 01 | ಕೃಷ್ಣರಾಜಪೇಟೆ | 342 |
| 02 | ಮದ್ದೂರು | 150 |
| 03 | ಮಳವಳ್ಳಿ | 173 |
| 04 | ಮಂಡ್ಯ | 188 |
| 05 | ನಾಗಮಂಗಲ | 333 |
| 06 | ಪಾಂಡವಪುರ | 141 |
| 07 | ಶ್ರೀರಂಗಪಟ್ಟಣ | 75 |
| | ಒಟ್ಟು | 1402 |

| ಕ್ರ ಸಂ | ಪ್ರಶ್ನೆ | ಉತ್ತರಗಳು |
|---|---|---|
| ಆ | ಮಂಡ್ಯ ಜಿಲ್ಲೆಯ ಎಲ್ಲಾ ಗ್ರಾಮಗಳಿಗೂ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲಾಗಿದೆ; (ತಾಲ್ಲೂಕುವಾರು ಮಾಹಿತಿ ನೀಡುವುದು) | ಮಂಡ್ಯ ಜಿಲ್ಲೆಯಲ್ಲಿ ಎಲ್ಲಾ ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ಮಿಸಲಾಗಿರುವುದಿಲ್ಲ. ಜಿಲ್ಲೆಯಲ್ಲಿನ 520 ಗ್ರಾಮಗಳಲ್ಲಿ 726 ಶುದ್ಧ ಕುಡಿಯುವ ನೀರು ಘಟಕಗಳನ್ನು ಅಳವಡಿಸಲಾಗಿರುತ್ತದೆ..<br><br>ತಾಲ್ಲೂಕುವಾರು ಮಾಹಿತಿ ಈ ಕೆಳಕಂಡಂತೆ ಇದೆ. |

| ಕ್ರ. ಸಂ | ತಾಲ್ಲೂಕಿನ ಹೆಸರು | ಶುದ್ಧ ಕುಡಿಯುವ ನೀರಿನ ಘಟಕ ಅಳವಡಿಸಲಾಗಿರುವ ಗ್ರಾಮಗಳ ಸಂಖ್ಯೆ | ಅಳವಡಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ |
|---|---|---|---|
| 01 | ಕೃಷ್ಣರಾಜಪೇಟೆ | 85 | 93 |
| 02 | ಮದ್ದೂರು | 76 | 108 |
| 03 | ಮಳವಳ್ಳಿ | 71 | 97 |
| 04 | ಮಂಡ್ಯ | 131 | 171 |
| 05 | ನಾಗಮಂಗಲ | 57 | 92 |
| 06 | ಪಾಂಡವಪುರ | 53 | 86 |
| 07 | ಶ್ರೀರಂಗಪಟ್ಟಣ | 47 | 79 |
| | ಒಟ್ಟು | **520** | **726** |

| | | |
|---|---|---|
| ಇ | ಜಿಲ್ಲೆಯಲ್ಲಿನ ಇನ್ನೂ ಎಷ್ಟು ಗ್ರಾಮಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಬೇಕಾಗಿದೆ; ಇದುವರೆವಿಗೂ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸದೇ ಇರಲು ಕಾರಣಗಳೇನು; (ವಿವರಗಳನ್ನು ನೀಡುವುದು). | ಜನವಸತಿಗಳಲ್ಲಿನ ಕಲುಷಿತ ಜಲಮೂಲಗಳಿಗೆ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಲಾಗಿದ್ದು, ಉಳಿದ 882 ಗ್ರಾಮಗಳಲ್ಲಿನ ಜಲಮೂಲಗಳಲ್ಲಿ ಕಲುಷಿತೆ ಬಗ್ಗೆ ವರದಿ ಇಲ್ಲದಿರುವುದರಿಂದ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅಳವಡಿಸಿರುವುದಿಲ್ಲ. |
| ಈ | ಗ್ರಾಮಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಲು ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು?(ಸಂಪೂರ್ಣ ಮಾಹಿತಿ ನೀಡುವುದು) | ಗ್ರಾ.ಕು.ನೀ&ನೈ ಇಲಾಖೆಗೆ ಸ್ವೀಕೃತವಾದ ಪ್ರಸ್ತಾವನೆಯಲ್ಲಿ ಕುಡಿಯುವ ನೀರು ಕಲುಷಿತವೆಂದು ಕಂಡು ಬಂದಲ್ಲಿ ಜಿಲ್ಲಾ ಪರೀಕ್ಷಾ ಪ್ರಯೋಗಾಲಯ, NABL ಪರೀಕ್ಷಾ ಪ್ರಯೋಗಾಲಯ ಮತ್ತು KSPCB ಪರೀಕ್ಷಾ ಪ್ರಯೋಗಾಲಯಗಳ ವರದಿಯೊಂದಿಗೆ ನಿಗಧಿತ ಚೆಕ್‌ಲಿಸ್ಟ್ ಸಲ್ಲಿಸಿದ ನಂತರ ಶುದ್ಧ ಕುಡಿಯುವ ನೀರಿನ ಘಟಕದ ಅವಶ್ಯಕತೆ ಇದ್ದಲ್ಲಿ ಮಾತ್ರ ಪ್ರಸ್ತಾವನೆಯನ್ನು ಅನುಮೋದಿಸಲಾಗುವುದು. |
| ಉ | ದುಸ್ಥಿತಿಯಲ್ಲಿರುವ ಘಟಕಗಳನ್ನು ದುರಸ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ನೀಡುವುದು) | ಶುದ್ಧ ಕುಡಿಯುವ ನೀರಿನ ಘಟಕಗಳು ದುಸ್ಥಿತಿಗೆ ಬಂದಲ್ಲಿ ಟೆಂಡರ್ ಕರಾರಿರನ್ವಯ ಆಗಿಂದಾಗ್ಗೆ ಸರಿಪಡಿಸಿ ಶುದ್ಧ ಕುಡಿಯುವ ನೀರನ್ನು ಒದಗಿಸಲಾಗುವುದು. ಗುತ್ತಿಗೆ ಪಡೆದ ಸಂಸ್ಥೆಗಳ ಸಮನ್ವಯದೊಂದಿಗೆ ಘಟಕಗಳನ್ನು ಸರಿಪಡಿಸಲು ಇಲಾಖಾ ವತಿಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| ಊ | ಸರ್ಕಾರ ಅಳವಡಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ಕಾರ್ಯ ನಿರ್ವಹಿಸದೇ ಇರುವ ಘಟಕಗಳ ಸಂಖ್ಯೆ ಎಷ್ಟು? | ಮಂಡ್ಯ ಜಿಲ್ಲೆಯಲ್ಲಿ ಅಳವಡಿಸಲಾಗಿರುವ ಒಟ್ಟು 726 ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ 20 ಘಟಕಗಳು ತಾತ್ಕಾಲಿಕವಾಗಿ ದುರಸ್ತಿಗೆ ಒಳಪಟ್ಟಿರುತ್ತವೆ. |

ಸಂ:ಗ್ರಾಕುನೀ&ನೈಇ 613 ಗ್ರಾನೀಸ(4)2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ